# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** : **1085**
**ಮಾನ್ಯ ಸದಸ್ಯರ ಹೆಸರು** : **ಶ್ರೀ ಕಿಶೋರ್ ಕುಮಾರ್ ಪುತ್ತೂರ್**
**(ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು)**
**ಉತ್ತರಿಸುವ ದಿನಾಂಕ** : **12/03/2026**
**ಉತ್ತರಿಸುವ ಸಚಿವರು** : **ಗೃಹ ಸಚಿವರು**

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮರ್ಯಾದೆಗೇಡು ಹತ್ಯೆಗಳ (Honor Killing) ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ 15 ಮರ್ಯಾದೆಗೇಡು ಹತ್ಯೆ ಪ್ರಕರಣಗಳು ದಾಖಲಾಗಿರುತ್ತವೆ. ಮುಂದುವರೆದು, ಬಂಧಿಸಲಾದ ಆರೋಪಿಗಳು, ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಲಾದ ದೋಷಾರೋಪಣಾ ಪಟ್ಟಿ ಸಂಖ್ಯೆ ಹಾಗೂ ಮಾನ್ಯ ನ್ಯಾಯಾಲಯದಲ್ಲಿ ಇತ್ಯರ್ಥವಾದ (ತೀರ್ಪು ನೀಡಿದ) ಪ್ರಕರಣಗಳ ವರ್ಷವಾರು ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ - ಅ** ರಲ್ಲಿ ಒದಗಿಸಲಾಗಿದೆ. |
| ಆ | ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಮರ್ಯಾದೆಗೇಡು ಹತ್ಯೆ ಪ್ರಕರಣಗಳು ದಾಖಲಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) | |
| ಇ | ಈ ಪ್ರಕರಣಗಳಲ್ಲಿ ಎಷ್ಟು ಆರೋಪಿಗಳನ್ನು ಬಂಧಿಸಲಾಗಿದೆ? ಎಷ್ಟು ದೋಷಾರೋಪಣಾ ಪಟ್ಟಿ ಸಲ್ಲಿಸಲಾಗಿದೆ? ಎಷ್ಟು ನ್ಯಾಯಾಲಯಗಳು ತೀರ್ಪು ನೀಡಿವೆ? | |
| ಈ | ಸರ್ಕಾರವು ಮರ್ಯಾದೆಗೇಡು ಹತ್ಯೆಗಳನ್ನು ತಡೆಯಲು ಯಾವುದೇ ಕಠಿಣ ಕಾನೂನು ಅಥವಾ ಪ್ರಮಾಣಿತ ಕಾರ್ಯಾಚರಣೆ ವಿಧಾನ (SOP) ಮಾಡಲಾಗಿದೆಯೇ? | ಮರ್ಯಾದೆಗೇಡಿನ ಹತ್ಯೆಗಳ ಪ್ರಕರಣಗಳು ಜರುಗದಂತೆ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ:-<br><br>➢ ಪ್ರತಿ ತಿಂಗಳು ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆ ಮತ್ತು ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ನಿಯಮಿತವಾಗಿ ಪ್ರತಿ 2ನೇ ಭಾನುವಾರ ಮತ್ತು ಕೊನೆಯ ಭಾನುವಾರ ಎಸ್.ಸಿ/ಎಸ್.ಟಿ. ಜನಾಂಗದವರ ಕುಂದು-ಕೊರತೆಗಳನ್ನು ಆಲಿಸುವ ಸಂಬAಧ ಸಭೆಗಳನ್ನು ಆಯೋಜಿಸಲಾಗುತ್ತಿದೆ.<br><br>➢ ಪ್ರತಿ ಊರಿನ ದಲಿತರ ಕಾಲೋನಿಗೆ ನಿಯಮಿತವಾಗಿ ಹಾಗೂ ಕಡ್ಡಾಯವಾಗಿ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳಿಂದ ಗಸ್ತು ನಿರ್ವಹಣೆ. ಆ ಸಮಯದಲ್ಲೂ ಸಹ ದಲಿತರ ಕುಂದು-ಕೊರತೆ ಕೇಳಿ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳ ಗಮನಕ್ಕೆ ತರಲಾಗುತ್ತಿದೆ.<br><br>➢ ಸಮಾಜದಲ್ಲಿರುವ ಅಸ್ಪೃಶ್ಯತೆಯನ್ನು ನಿವಾರಣೆ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಮತ್ತು ಜಿಲ್ಲಾಡಳಿತದೊಂದಿಗೆ ಸದಾ ಸಂಪರ್ಕದಲ್ಲಿದ್ದು, |

| | | |
|---|---|---|
| | | ಬೀದಿನಾಟಕಗಳು, ಅರಿವು ಕಾರ್ಯಕ್ರಮಗಳು ಮತ್ತು ಜಾಗೃತಿ ಕಾರ್ಯಕ್ರಮಗಳಲ್ಲಿ ಅಗತ್ಯ ಸಹಕಾರ ನೀಡಲಾಗುತ್ತಿದೆ.<br><br>➢ ಕ್ಯೂ.ಆರ್.ಟಿ. 112 ತುರ್ತು ಸ್ಪಂದನ, ಹಗಲು ಮತ್ತು ರಾತ್ರಿ ಪೊಲೀಸ್ ಬೀಟ್ ಹಾಗೂ ಗುಡ್‌ಮಾರ್ನಿಂಗ್ ಬೀಟ್ ನಂತಹ ವಿಧಾನಗಳ ಮೂಲಕ ಸಾರ್ವಜನಿಕರೊಂದಿಗೆ ಪೊಲೀಸ್ ಇಲಾಖೆ ಸಕ್ರಿಯವಾಗಿರುವಂತೆ ಕ್ರಮ ಕೈಗೊಳ್ಳಲಾಗಿರುತ್ತದೆ.<br><br>➢ ಸಾರ್ವಜನಿಕ ಭಿತ್ತಿಪತ್ರಗಳ ಮೂಲಕ ಮಹಿಳೆಯರು ಮತ್ತು ಮಕ್ಕಳು ಹಾಗೂ ಶಾಲಾ-ಕಾಲೇಜಿಗೆ ತೆರಳುವ ವಿದ್ಯಾರ್ಥಿನಿಯರಿಗೆ ಮಹಿಳಾ ದೌರ್ಜನ್ಯ ಅಪರಾಧಗಳ ಬಗ್ಗೆ, ಅವರ ಶಾಲಾ-ಕಾಲೇಜು ಮತ್ತು ವಸತಿನಿಲಯಗಳ ಬಳಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮೈಕ್‌ನಲ್ಲಿ ಪ್ರಸಾರ ಮಾಡುವ ಮೂಲಕ ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ. ಸಾರ್ವಜನಿಕರಿಗೆ ಧ್ವನಿವರ್ಧಕಗಳ ಮೂಲಕ ಎಚ್ಚರಿಕೆ ಸಂದೇಶಗಳನ್ನು ನೀಡಲಾಗುತ್ತಿದೆ.<br><br>➢ ಮಹಿಳಾ ಮತ್ತು ಮಕ್ಕಳ ಚಟುವಟಿಕೆ ಹೆಚ್ಚು-ಹೆಚ್ಚು ಇರುವ ಸ್ಥಳಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸುವಂತೆ ಸ್ಥಳಿಯ ಆಡಳಿತ ಸಂಸ್ಥೆಗಳು, ಹಾಸ್ಟೆಲ್ ಹಾಗೂ ಮಹಿಳೆಯರ ಹೋಂಸ್ಟೇ ನಡೆಸುವ ಖಾಸಗಿ ಉದ್ಯಮಿಗಳಿಗೆ ಸೂಚಿಸಲಾಗಿರುತ್ತದೆ. ಪೊಲೀಸ್ ಇಲಾಖೆ ವತಿಯಿಂದಲೂ ಸಹ ಜಿಲ್ಲೆಯ ಪ್ರಮುಖ ನಗರ & ಪಟ್ಟಣಗಳ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿರುತ್ತದೆ.<br><br>ಇಂತಹ ಘಟನೆಗಳನ್ನು ನಿಯಂತ್ರಿಸಲು ಕಠಿಣ ಕಾನೂನನ್ನು ಜಾರಿಗೊಳಿಸುವ ವಿಷಯವು ಪರಿಶೀಲನೆಯಲ್ಲಿರುತ್ತದೆ. |
| ೮೦ | ಪ್ರೇಮ ವಿವಾಹ, ಅಂತರ್ಜಾತಿ ವಿವಾಹ ಮುಂತಾದ ವಿವಾಹಗಳ ಹಿನ್ನಲೆಯಲ್ಲಿ ಜೀವಭಯ ಹೊಂದಿರುವ ದಂಪತಿಗಳಿಗೆ ರಕ್ಷಣೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? ಜಿಲ್ಲಾ ಮಟ್ಟದಲ್ಲಿ ಸುರಕ್ಷತಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ? ಇಂತಹ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? | ಪ್ರೇಮ ವಿವಾಹ, ಅಂತರ್ಜಾತಿ ವಿವಾಹ ಪ್ರಕರಣಗಳನ್ನು ತಡೆಗಟ್ಟಲು ಕೈಗೊಂಡ ಕ್ರಮಗಳ ವಿವರಗಳು ಈ ಕೆಳಕಂಡಂತಿವೆ:-<br><br>➢ ಪ್ರೇಮ ವಿವಾಹ, ಅಂತರ್ಜಾತಿ ವಿವಾಹ ಮುಂತಾದ ವಿವಾಹಗಳ ಹಿನ್ನಲೆಯಲ್ಲಿ ಜೀವಭಯ ಹೊಂದಿರುವ ದಂಪತಿಗಳು ದೂರು ಸಲ್ಲಿಸಿದ್ದಲ್ಲಿ ಕಾನೂನು ರೀತ್ಯಾ ಸೂಕ್ತ ಕ್ರಮ ಕೈಗೊಳ್ಳಲಾಗುವುದು.<br><br>➢ ಜೀವ ಭಯದ ಬಗ್ಗೆ ದೂರು ಬಂದ ಕೂಡಲೇ ತಕ್ಷಣ ಭದ್ರತೆ ಒದಗಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು ಹಾಗೂ ಅಗತ್ಯವಿದ್ದರೆ ವೈಯಕ್ತಿಕ ಪೊಲೀಸ್ ಕಾವಲು (Personal Security) ನೀಡಲಾಗುತ್ತದೆ.<br><br>➢ ದಂಪತಿಗಳಿಗೆ ಬೆದರಿಕೆ ನೀಡುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ. |

| | | |
|---|---|---|
| | | ➢ ಅಂತರ್ಜಾತಿ ವಿವಾಹವಾದ ದಂಪತಿಗಳ ಕುಟುಂಬಗಳ ಸದಸ್ಯರುಗಳಲ್ಲಿ ವೈಮನಸ್ಸು ಉಂಟಾಗಿ ಏನಾದರೂ ಸಾರ್ವಜನಿಕ ಶಾಂತಿ ಹಾಗೂ ತಮ್ಮ ಆಸ್ತಿ ಪಾಸ್ತಿಗಳಿಗೆ ಹಾನಿಯುಂಟಾಗುವ ಸಾಧ್ಯತೆ ಕಂಡು ಬಂದಲ್ಲಿ ಅವರುಗಳ ಮೇಲೆ ಮುಂಜಾಗ್ರತಾ ಪ್ರಕರಣಗಳನ್ನು ದಾಖಲಿಸಿ ಕ್ರಮ ಜರುಗಿಸಲಾಗುವುದು.<br><br>➢ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸಲು ಕ್ರಮ ಕೈಗೊಳ್ಳಲಾಗಿದೆ ಹಾಗೂ ಸಿಬ್ಬಂದಿಗಳು ಬೀಟ್ ಮೀಟಿಂಗ್ ಸಮಯದಲ್ಲಿ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಕೈಗೊಂಡಿರುತ್ತದೆ.<br><br>ಜಿಲ್ಲಾ ಮಟ್ಟದಲ್ಲಿ ಯಾವುದೇ ಪ್ರತ್ಯೇಕ ಸುರಕ್ಷತಾ ಕೇಂದ್ರಗಳನ್ನು ಸ್ಥಾಪಿಸಲಾಗಿರುವುದಿಲ್ಲ. |

**ಸಂಖ್ಯೆ: ಹೆಚ್‌ಡಿ 35 ಪಿಸಿಕ್ಯೂ 2026**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು